ಸಂಖ್ಯೆ: ಇಡಿ/ಕೆಇಎ/29/ನೇ.ವಿ/2026(ಕೆಕೆ) ದಿನಾಂಕ: 06.11.2026.

ಪ್ರಕಟಣೆ

ಪ್ರಾಧಿಕಾರದ ಅಧಿಸೂಚನೆ ಸಂಖ್ಯೆ: ಇಡಿ/ಕೆಇಎ/29/ನೇ.ವಿ/2026(ಕೆಕೆ), ದಿನಾಂಕ: 03.09.2026 ರಲ್ಲಿ ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ಯ ಕಲ್ಯಾಣ-ಕರ್ನಾಟಕ ರಾಜ್ಯ ವ್ಯಾಪ್ತಿ ಸ್ಥಳೀಯ ವೃಂದದಲ್ಲಿನ ಗ್ರೂಪ್-ಎ ವೃಂದದ 31 ಪ್ರಾಂಶುಪಾಲರ ನೇರ ನೇಮಕಾತಿ ಕೋಟಾದ ಹುದ್ದೆಗಳನ್ನು ಭರ್ತಿ ಮಾಡಲು ಶಾಲಾ ಶಿಕ್ಷಣ ಇಲಾಖೆಯ(ಸರ್ಕಾರಿ ಪದವಿ ಪೂರ್ವ ಕಾಲೇಜುಗಳ) ಉಪನ್ಯಾಸಕರುಗಳಿಂದ ಅರ್ಜಿಯನ್ನು ಆಹ್ವಾನಿಸಿ, ಪ್ರಾಂಶುಪಾಲರ ಹುದ್ದೆಗೆ ಅರ್ಜಿ ಸಲ್ಲಿಸಲು ದಿನಾಂಕ: 04.10.2026 ರವರೆಗೆ ಮತ್ತು ಶುಲ್ಕ ಪಾವತಿಸಲು ದಿನಾಂಕ: 05.10.2026 ರವರೆಗೆ ಅವಕಾಶ ನೀಡಲಾಗಿತ್ತು. ತದನಂತರದಲ್ಲಿ ಅರ್ಜಿ ಸಲ್ಲಿಸಲು ಹಾಗೂ ಶುಲ್ಕ ಪಾವತಿಸಲು ದಿನಾಂಕ: 30.10.2026 ರವರೆಗೆ ವಿಸ್ತರಿಸಲಾಗಿತ್ತು.

ಪ್ರಸ್ತುತ, ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಇವರು ದಿನಾಂಕ: 06.11.2026 ರಂದು ಸಲ್ಲಿಸಿರುವ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಇಲಾಖೆಯು ನೀಡಿರುವ ಸ್ಪಷ್ಟೀಕರಣದಂತೆ, ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಪಿಎಲ್ಎಕ್ಸ್ 2012, ದಿನಾಂಕ: 06.11.2013 ರ ನಿಯಮ-8 ರನ್ವಯ, ಸಂವಿಧಾನದ ಅನುಚ್ಛೇದ 371(ಜೆ) ರ ಅಡಿಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳು ಯಾವುದೇ ನೇರ ನೇಮಕಾತಿ ಪ್ರಕ್ರಿಯೆಯಲ್ಲಿ ಸ್ಥಳೀಯ ವೃಂದದ(KK) ಹುದ್ದೆಗಳ ಜೊತೆಗೆ ಉಳಿಕೆ ಮೂಲ ವೃಂದದ (NKK) ಹುದ್ದೆಗಳಿಗೂ ಸ್ಪರ್ಧಿಸಲು ಅರ್ಹರಾಗಿರುತ್ತಾರೆ. ಪ್ರಸ್ತುತ ನೇಮಕಾತಿಯು ಗ್ರೂಪ್-ಎ ಪ್ರಾಂಶುಪಾಲರ ವೃಂದದ ಹುದ್ದೆಗಳಿಗೆ ಹೊಸದಾಗಿ ನೇರ ನೇಮಕಾತಿ ಮಾಡುವ ಪ್ರಕ್ರಿಯೆಯಾಗಿರುವುದರಿಂದ, ಸಾಮಾನ್ಯ ನೇರ ನೇಮಕಾತಿ ನಿಯಮಾವಳಿಗಳನ್ನು ಅನ್ವಯಿಸುವುದು ಸಂವಿಧಾನದ ಅನುಚ್ಛೇದ 371(ಜೆ) ರ ಆಶಯಕ್ಕೆ ಅನುಗುಣವಾಗಿರುತ್ತದೆ. ಅದರಂತೆ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳಿಗೆ ಸ್ಥಳೀಯ ವೃಂದದ (KK) ಹುದ್ದೆಗಳ ಜೊತೆಗೆ ಉಳಿಕೆ ಮೂಲ ವೃಂದದ (NKK) ಹುದ್ದೆಗಳಿಗೂ ಸ್ಪರ್ಧಿಸಲು ಅವಕಾಶ ಕಲ್ಪಿಸುವಂತೆ ತಿಳಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಪ್ರಸ್ತುತ ಪ್ರಾಂಶುಪಾಲರ ನೇರ ನೇಮಕಾತಿ ಪ್ರಕ್ರಿಯೆಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ ಅರ್ಹ ಸ್ಥಳೀಯ ಅಭ್ಯರ್ಥಿಗಳಿಗೆ ಸ್ಥಳೀಯ ವೃಂದದ (KK) ಹುದ್ದೆಗಳೊಂದಿಗೆ ಉಳಿಕೆ ಮೂಲ ವೃಂದದ (NKK) ಹುದ್ದೆಗಳಿಗೂ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ಪ್ರಸ್ತುತ ಪ್ರಾಂಶುಪಾಲರ ಹುದ್ದೆಗೆ ಅರ್ಜಿ ಸಲ್ಲಿಸಲು ಹಾಗೂ ಶುಲ್ಕವನ್ನು ಪಾವತಿಸಲು ದಿನಾಂಕ: 10.11.2026 ರವರೆಗೆ ವಿಸ್ತರಿಸಲಾಗಿದೆ.

ಉಳಿದಂತೆ, ದಿನಾಂಕ: 03.09.2026 ರ ಅಧಿಸೂಚನೆಯಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in